# ಪತ್ರಿಕಾ ಪ್ರಕಟಣೆ

ಕೊಡಗು ಜಿಲ್ಲೆಯಲ್ಲಿ ಮಾದಕವಸ್ತುಗಳ ಮಾರಾಟ ಜಾಲದ ಬಗ್ಗೆ ಸಾರ್ವಜನಿಕರಿಂದ ಅನೇಕ ದೂರುಗಳು ಕೇಳ ಬಂದ ಹಿನ್ನಲೆಯಲ್ಲಿ ಮಾದಕ ವಸ್ತು ಸೇವನೆ ಹಾಗೂ ಮಾರಾಟದ ವಿರುದ್ಧ ಮಾಹಿತಿ ಕಲೆಹಾಕಿ ದಾಳ ನಡೆಸುವಂತೆ ಕೊಡಗು ಜಿಲ್ಲಾ ಪೊಲೀಸ್ ಅಧೀಕ್ಷಕರು ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿಗಳಗೆ ನೀಡಿದ ಸೂಚನೆಯ ಮೇರೆಗೆ ವಿರಾಜಪೇಟೆ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ಗಾಂಜಾವನ್ನು ಮಾರಾಟಮಾಡುತ್ತಿದ್ದ ಜಾಲವನ್ನು ಪತ್ತೆಹಚ್ಚುವಲ್ಲಿ ವಿರಾಜಪೇಟೆ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ.

ದಿನಾಂಕ 15-08-2018 ರಂದು ವಿರಾಜಪೇಟೆ ನಗರದ ಹರಿಕೇರಿಯ ಗಲ್ಲಿಯೊಂದರಲ್ಲಿ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿ ಕಲೆಹಾಕಿದ ವಿರಾಜಪೇಟೆ ನಗರ ಠಾಣಾಧಿಕಾರಿಯವರು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ವಿರಾಜಪೇಟೆ ನಗರದ ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದು ಅವರಿಂದ 1.054 ಕೆ.ಜಿ ತೂಕದ ಗಾಂಜಾವನ್ನು ಹಾಗೂ ಗಾಂಜಾ ಮಾರಾಟ ಮಾಡಿ ಇಟ್ಟುಕೊಂಡಿದ್ದ 700/- ರೂ ನಗದು ಹಣವನ್ನು ವಶಪಡಿಕೊಂಡಿದ್ದು, ವಶಪಡಿಕೊಂಡಿರುವ ಗಾಂಜಾದ ಮೌಲ್ಯ 21.000/- ರೂ ಆಗಬಹುದೆಂದು ಅಂದಾಜಿಸಲಾಗಿದೆ. ಈ ಬಗ್ಗೆ ವಿರಾಜಪೇಟೆ ನಗರ ಪೊಲೀಸ್ ಠಾಣೆಯಲ್ಲಿ ಮೊ.ಸಂ. 92/2018 ಕಲಂ 20(ಬಿ)ಖಖ ಎನ್.ಡಿ.ಪಿ.ಎಸ್. ಕಾಯಿದೆ 1985 ರೀತ್ಯಾ ಪ್ರಕರಣ ದಾಖಲಾಗಿರುತ್ತದೆ.

**ದಸ್ತಗಿರಿ ಮಾಡಲಾದ ಆರೋಪಿಗಳ ವಿವರ ಈ ಕೆಳಕಂಡಂತಿರುತ್ತದೆ.**

1) **ಎಂ.ಹಸೈನಾರ್ ತಂದೆ ಲೇ||ಮಜೀದ್, 36 ವರ್ಷ, ಸುಣ್ಣದ ಬೀದಿ, ವಿರಾಜಪೇಟೆ ನಗರ, ಕೊಡಗು ಜಿಲ್ಲೆ.**

2) **ಜಾನ್ @ ಜೋನ್ ತಂದೆ ಲೇ|| ಸುಕುಮಾರನ್, 56 ವರ್ಷ, ಉಡೋತ್‌ಮೊಟ್ಟೆ ಅಪ್ಪಂಗಳ, ಹೆರವನಾಡು ಗ್ರಾಮ, ಮಡಿಕೇರಿ, ಕೊಡಗು ಜಿಲ್ಲೆ.**

ಈ ಕಾರ್ಯಾಚರಣೆಯನ್ನು ಪೊಲೀಸ್ ಅಧೀಕ್ಷಕರು, ಕೊಡಗು ಜಿಲ್ಲೆ ರವರ ಮಾರ್ಗದರ್ಶನದಲ್ಲಿ, ವಿರಾಜಪೇಟೆ ಉಪ-ವಿಭಾಗದ ಡಿವೈಎಸ್‌ಪಿ ಶ್ರೀ ನಾಗಪ್ಪ ರವರ ನೇತೃತ್ವದಲ್ಲಿ ವಿರಾಜಪೇಟೆ ವೃತ್ತ ನಿರೀಕ್ಷಕರಾದ ಶ್ರೀ ಕುಮಾರ್ ಆರಾಧ್ಯ, ವಿರಾಜಪೇಟೆ ನಗರ ಪೊಲೀಸ್ ಠಾಣಾ ಪಿ.ಎಸ್.ಐ ಸಂತೋಷ್ ಕಶ್ಯಪ್, ಎಎಸ್‌ಐ ಶ್ರೀ ಮತ್ತಣ್ಣ ಹಾಗು ಸಿಬ್ಬಂದಿಗಳಾದ ಶ್ರೀ ಸುಬ್ರಮಣಿ, ಶ್ರೀ ಸತೀಶ್, ಶ್ರೀ ಮುನೀರ್ ಹಾಗು ಚಾಲಕ ಶ್ರೀ ಯೋಗೇಶ್ ರವರು ನಡೆಸಿದ್ದು, ಈ ಪ್ರಕರಣವನ್ನು ಪತ್ತೆಹಚ್ಚಿದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರು ಶ್ಲಾಘಿಸಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟದ ಬಗ್ಗೆ ಮಾಹಿತಿ ದೊರೆತಲ್ಲಿ ಕೂಡಲೇ ಪೊಲೀಸ್ ಕಂಟ್ರೋಲ್ ರೂಂ ಅಥವಾ ಆಯಾ ಸರಹದ್ದಿನ ಪೊಲೀಸ್ ಠಾಣೆಗೆ ಮಾಹಿತಿಯನ್ನು ನೀಡುವಂತೆ ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ,**
**ಕೊಡಗು ಜಿಲ್ಲೆ.**


ಹಸೈನಾರ್


ಜಾನ್@ಜೋನ್